# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 01-10-2021 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು**

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು.
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ಪುಷ್ಪ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),
6. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
7. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)
8. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಶ್ರೀ ದವಲ್, ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಸೂಪರ್‌ವೈಸರ್,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
6. ಸಬ್ ಇನ್ಸ್‌ಪೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
7. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
8. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
9. ಶ್ರೀಮತಿ ಗೀತಾ, ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ) ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಹೆಚ್ಚು ಸಂಚಾರ ಇರುವ ಪ್ರಮುಖ ಜಂಕ್ಷನ್‌ಗಳಲ್ಲಿ ವೈಜ್ಞಾನಿಕ ಹಂಪ್‌ಗಳನ್ನು ಅಳವಡಿಸಿ, ಬಣ್ಣ ಬಳೆಯಲು ಪ್ರಸ್ತಾಪಿಸಿದಾಗ, ಈ ಬಗ್ಗೆ ಚರ್ಚಿಸಿ, ಮಾನ್ಯ ಅಧ್ಯಕ್ಷರು ವಾರ್ಡ್ ಪ್ರದೇಶದಲ್ಲಿ ಅವಶ್ಯಕವಿರುವ ಕಡೆಗಳಲ್ಲಿ ವೈಜ್ಞಾನಿಕವಾಗಿ ಹಂಪ್‌ಗಳನ್ನು ಅಳವಡಿಸಲು ಸಂಚಾರಿ ಪೊಲೀಸರ ಶಿಫಾರಸ್ಸಿನೊಂದಿಗೆ ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ ರವರಿಗೆ ಪತ್ರವನ್ನು ಬರೆಯಲಾಗಿದ್ದು, ಸದರಿ ವಿಭಾಗದವರು ಕ್ರಮವನ್ನು ಕೈಗೊಳ್ಳುವರೆಂದು ಸಭೆಗೆ ತಿಳಿಸಿದರು.



Scanned with CamScanner

2) ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ, ಕಮ್ಮನಹಳ್ಳಿ ಮುಖ್ಯರಸ್ತೆಯ ಎರಡೂ ಬದಿಯಲ್ಲಿನ ಪಾದಾಚಾರಿ ಮಾರ್ಗದಲ್ಲಿ ಸಾರ್ವಜನಿಕರು ಸಂಚರಿಸುವಾಗ ರಸ್ತೆ ಅಡ್ಡಲಾಗಿದ್ದಾಗ ಇಳಿಯುವುದು ಹಾಗೂ ಹತ್ತುವುದು ವಯೋವೃದ್ಧರಿಗೆ ಕಷ್ಟಕರವಾಗಿರುತ್ತದೆ. ಆದ್ದರಿಂದ ಇದಕ್ಕೆ ಇಳಿಜಾರಾಗಿ, ಮೆಟ್ಟಿಲುಗಳನ್ನು ಅಳವಡಿಸಲು ಪ್ರಸ್ತಾಪಿಸಿದಾಗ, ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ, ಪರಿಶೀಲಿಸಿ, ಕ್ರಮ ಕೈಗೊಳ್ಳಲು ಸಭೆಯು ತೀರ್ಮಾನಿಸಿತು.

3) ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ, ರಾಮಯ್ಯ ಬಡಾವಣೆಯ ಚೆ ಮುಖ್ಯರಸ್ತೆಯಲ್ಲಿ ಹಾಗೂ ಹಲವು ರಸ್ತೆಗಳಲ್ಲಿ ರಸ್ತೆಗಳನ್ನು ಸ್ವಚ್ಛಗೊಳಿಸಲು ಕಡಿಮೆ ಪೌರಕಾರ್ಮಿಕರನ್ನು ನಿಯೋಜನೆಗೊಳಿಸಿರುವುದಾಗಿ ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಿ, ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ನಿರೀಕ್ಷಕರನ್ನು ಪ್ರಶ್ನಿಸಲಾಗಿ, ಸದರಿಯವರು ಇನ್ನೂ ಹೆಚ್ಚಿನ ಪೌರ ಕಾರ್ಮಿಕರನ್ನು ನಿಯೋಜಿಸಿ, ರಾಮಯ್ಯ ಬಡಾವಣೆಯ ಎಲ್ಲಾ ರಸ್ತೆಗಳನ್ನು ಸ್ವಚ್ಛಗೊಳಿಸಲಾಗುವುದು ಎಂದು ಸಭೆಗೆ ತಿಳಿಸಿದರು.

4) ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ, ಚಿನ್ನಪ್ಪ ಬಡಾವಣೆಯಲ್ಲಿ ಸಂಗಮ್ ಮೆಸ್ ಹತ್ತಿರ ಪಿ.ಜಿ ಕಟ್ಟಡದಲ್ಲಿ ಒಳಚರಂಡಿ ಬ್ಲಾಕ್ ಆಗಿರುತ್ತದೆ, ಮತ್ತು ಸಮರ್ಪಕವಾಗಿ ಚಾಲನೆ ಇಲ್ಲದೇ ಒಳಚರಂಡಿ ನೀರು ಹಿಂದಕ್ಕೆ ಬರುತ್ತಿದ್ದು, ಕೂಡಲೇ ಕ್ರಮ ವಹಿಸಲು ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ ಬಿಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಸ್ಥಳ ಪರಿಶೀಲಿಸಿ, ಕೂಡಲೇ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

5) ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ, ಹೆಚ್.ಬಿ.ಆರ್ ಬಡಾವಣೆ 1ನೇ ಹಂತದಲ್ಲಿ ವಿದ್ಯುತ್ ಸರಬರಾಜು ಪದೇ ಪದೇ ನಿಲುಗಡೆಯಾಗುತ್ತಿದ್ದು, ಮೊನ್ನೆ ಒಂದು ದಿನ ಬೆಳಿಗ್ಗೆ 7-30 ರಿಂದ ರಾತ್ರಿ 8-00 ರವರೆಗೆ ಸರಬರಾಜು ಇಲ್ಲದೆ, ಸಾರ್ವಜನಿಕರು ಪರದಾಡಬೇಕಾಗಿತ್ತು ಎಂದು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಹಾಜರಿದ್ದ, ಬೆಸ್ಕಾಂ ಅಧಿಕಾರಿಗಳು ಬೆಸ್ಕಾಂ ಭೂಗತ ಕೇಬಲ್‌ಗಳನ್ನು ಅಳವಡಿಸುವ ಕಾಮಗಾರಿ ಮುಕ್ತಾಯ ಹಂತದಲ್ಲಿದ್ದು, ಪೂರ್ಣಗೊಂಡ ನಂತರ ವಿದ್ಯುತ್ ಸರಬರಾಜನ್ನು ಕಡಿತಗೊಳಿಸುವ ಪ್ರಮೇಯ ಇರುವುದಿಲ್ಲ ಎಂದು ಸಭೆಗೆ ತಿಳಿಸಿದರು.

6) ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ, ಹೆಚ್.ಬಿ.ಆರ್ ಬಡಾವಣೆ 1ನೇ ಹಂತ ಪ್ರದೇಶದಲ್ಲಿ ಇತ್ತೀಚೆಗೆ ಜೇಬುಗಳ್ಳರು ಹಾಗೂ ಸರಗಳ್ಳತ ಹೆಚ್ಚಾಗುತ್ತಿದೆ ಎಂದು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಿ, ಸಭೆಯಲ್ಲಿ ಹಾಜರಿದ್ದ ಆರಕ್ಷಕ ಅಧಿಕಾರಿಗಳಿಗೆ ಸದರಿ ಪ್ರದೇಶದಲ್ಲಿ ದೈನಂದಿನ ಗಸ್ತನ್ನು ತೀವ್ರಗೊಳಿಸಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

7) ಡಾ॥ ಪುಷ್ಪ ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು ಮಾತನಾಡಿ, ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ವಾರ್ಡ್ ಕಛೇರಿಯ ಆಸ್ಪತ್ರೆಯಲ್ಲಿ ಕೋವಿಡ್-19 ಪರೀಕ್ಷೆಗಳನ್ನು ಸತತವಾಗಿ ನಡೆಸುತ್ತಿದ್ದು, ಒಟ್ಟು 08 ಸಕ್ರಿಯ ಪ್ರಕರಣಗಳಲ್ಲಿ 05 ಹೋಮ್ ಐಸೋಲೇಷನ್, 03 ಜನ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆಯುತ್ತಿರುತ್ತಾರೆ ಹಾಗೂ ಆರ್.ಟಿ.ಪಿ.ಸಿ.ಆರ್ ಹಾಗೂ ರ್‍ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಮಾಡಲಾಗುತ್ತಿರುತ್ತದೆ. ಪ್ರಸ್ತುತ 56000 ಸಾರ್ವಜನಿಕರಿಗೆ ಪರೀಕ್ಷೆ



Scanned with CamScanner

ಮಾಡಲಾಗಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ವ್ಯಾಕ್ಸಿನೇಷನ್ 38340 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

Prasanna Kumar. A
ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

**ಪ್ರತಿಯನ್ನು**

07/10/2021

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.

Scanned with CamScanner